ವಿಷಯ :– ಸೇಡಂ ತಾಲ್ಲೂಕಿನ ಅಲ್ಲಿಪೂರ ಹೊಸ ಕೆರೆ ನಿರ್ಮಾಣ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 450 (1192)

ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) :– ಮಾನ್ಯ ಸಣ್ಣ ನೀರಾವರಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗುಲ್ಬರ್ಗಾ ಜಿಲ್ಲೆ ಸೇಡಂ ತಾಲ್ಲೂಕಿನ ಅಲ್ಲಿಪೂರ ಹೊಸಕೆರೆ ಸಂಬಂಧಪಟ್ಟ ಇಲಾಖೆಯ ಎಲ್ಲಾ ಹಂತಗಳಿಂದ ಅನುಮೋದಿಸಲ್ಪಟ್ಟು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಯೋಜನೆಯಲ್ಲಿ ಸೇರ್ಪಡೆಯಾಗಿದೆಯೇ ?

ಆ) ಒಂದು ವೇಳೆ ಸೇರ್ಪಡೆ ಆಗಿದ್ದರೆ ಈ ವರ್ಷ 90–91 ಮಾರ್ಚ್ ಒಳಗಾಗಿ ಟೆಂಡರ್ ಆಗಿ ಕಾಮಗಾರಿಯನ್ನು ಪ್ರಾರಂಭ ಮಾಡಬಹುದೆ ?

ಇ) ಈ ವರ್ಷ 90–91 ಸಾಲಿನಲ್ಲಿ ಇದಕ್ಕೆ ಬಿಡುಗಡೆ ಮಾಡಿದ ಹಣ ಎಷ್ಟು ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) :–

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) 1990–91 ನೇ ಸಾಲಿನ ಆಯವ್ಯಯ ಪಟ್ಟಿಯಲ್ಲಿ ಈ ಕಾಮಗಾರಿಗೆ 50,000 ರೂ. ಗಳ ಅನುದಾನವಿದೆ.

ವಿಷಯ :– ನೆಲಮಂಗಲ ತಾಲ್ಲೂಕಿನಲ್ಲಿರುವ ಒಟ್ಟು ಕಾರ್ಖಾನೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 451 (894)

ಶ್ರೀ ಆಂಜನಮೂರ್ತಿ (ನೆಲಮಂಗಲ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಕಾರ್ಖಾನೆಗಳಿವೆ, (ದಾಸನಪುರ ಹೋಬಳಿಯು ಸೇರಿದಂತೆ)

ಆ) ಅವುಗಳಲ್ಲಿ ಉದ್ಯೋಗಿಗಳ ಸಂಖ್ಯೆ ಎಷ್ಟು ?

ಇ) ಅವುಗಳಲ್ಲಿ ಸ್ಥಳೀಯ ಉದ್ಯೋಗಿಗಳು ಎಷ್ಟು ? ಮತ್ತು ಪರ ಊರಿನವರ ಸಂಖ್ಯೆ ಎಷ್ಟು ? ಯಾವ ಯಾವ ಕಾರ್ಖಾನೆಯವರು ಸರ್ಕಾರದ ಆದೇಶದ ಪ್ರಕಾರ ಶೇಕಡಾ 80 ಭಾಗ ಸ್ಥಳೀಯರನ್ನೇ ನೇಮಿಸಿಕೊಂಡಿದ್ದಾರೆ.

ಈ) ಸರ್ಕಾರಿ ಆದೇಶ ಪಾಲಿಸದಿದ್ದವರ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ ? (ಕೈಗಾರಿಕೆಗಳ ಹೆಸರು ಮತ್ತು ಪೂರ್ಣ ಮಾಹಿತಿ ನೀಡುವುದು.)

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) :–

ಅ) ನೆಲಮಂಗಲ ತಾಲ್ಲೂಕಿನಲ್ಲಿ 494 ಕಾರ್ಖಾನೆಗಳಿವೆ. (ದಾಸನಪುರ ಹೋಬಳಿಯು ಬೆಂಗಳೂರು ನಗರ ಜಿಲ್ಲೆ ಉತ್ತರ ತಾಲ್ಲೂಕಿಗೆ ಸೇರಿರುತ್ತದೆ.)

ಆ) 1586.

ಇ) ಇಲ್ಲಿರುವ ಕಾರ್ಖಾನೆಗಳೆಲ್ಲ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಾಗಿವೆ ಮತ್ತು ಶೇಕಡಾ 80 ರಷ್ಟು ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ.

ಈ) ಉದ್ಭವಿಸುವುದಿಲ್ಲ.

ವಿಷಯ :– ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯ ಪ್ರಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 453 (895)

ಶ್ರೀ ಆಂಜನಮೂರ್ತಿ (ನೆಲಮಂಗಲ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆಯಾಗುತ್ತಿದೆ ?